**ಸಮಗ್ರ ಶಿಕ್ಷಣ ಕರ್ನಾಟಕ**
**ರಾಜ್ಯ ಯೋಜನಾ ನಿರ್ದೇಶಕರ ಕಛೇರಿ,. ಕೆ.ಆರ್.ವೃತ್ತ,ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಸಶಿಕ/ಆಚ/ಇಕೋ/01/2023

ದಿನಾಂಕ:16.05.2023

**ಸುತ್ತೋಲೆ**

ವಿಷಯ: "**ವಿಶ್ವ ಪರಿಸರ ದಿನಾಚರಣೆ**" ಜೂನ್-5 ರಂದು ಶಾಲಾ - ಕಾಲೇಜುಗಳ ಹಂತದಲ್ಲಿ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಭಾರತ ಸರ್ಕಾರ, ನವದೆಹಲಿ ರವರ ಪತ್ರ ಸಂಖ್ಯೆ : D.O.No.17-65/2022-UT.I (INS.5) ಮತ್ತು ದಿನಾಂಕ : 08.05.2023 .
2. ದಿನಾಂಕ: 11.05.2023 ರಂದು ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಯೋಜನಾ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ನೀಡಿದ ನಿರ್ದೇಶನದಂತೆ,

***************

ಉಲ್ಲೇಖಿತ ವಿಷಯ ಕ್ಕೆ ಸಂಬಂಧಿಸಿದಂತೆ "**ವಿಶ್ವ ಪರಿಸರ ದಿನಾಚರಣೆ** " ಅಂಗವಾಗಿ ಶಾಲಾ ಹಂತದಲ್ಲಿ "**ಪರಿಸರ ಸಂರಕ್ಷಣೆ ಹಾಗೂ ಮಿಷನ್ ಆಫ್ ಲೈಫ್**" ಚಟುವಟಿಕೆಗಳನ್ನು ಹಮ್ಮಿಕೊಂಡು ವಿದ್ಯಾರ್ಥಿಗಳಲ್ಲಿ ಸಂಪನ್ಮೂಲಗಳನ್ನು ಪ್ರಜ್ಞಾ ಹಾಗೂ ಉದ್ದೇಶಪೂರ್ವಕವಾಗಿ ಬಳಸುವಂತೆ ಪ್ರೇರೇಪಿಸುವುದು.

**ವಿಶ್ವ ಪರಿಸರ ದಿನಾಚರಣೆಯಂದು ಶಿಕ್ಷಕರು ಶಾಲಾ - ಕಾಲೇಜುಗಳ ಹಂತದಲ್ಲಿ ಹಮ್ಮಿಕೊಳ್ಳಬೇಕಾದ ಚಟುವಟಿಕೆಗಳು:**

1. ಇಕೋ ಕ್ಲಬ್ ಮತ್ತು ಪಿಎಂ ಶ್ರೀ ಶಾಲೆಗಳಲ್ಲಿ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಹಾಗೂ ಶಾಲೆಗಳ ಆವರಣದಲ್ಲಿ ಸಸಿಗಳನ್ನು ನೆಟ್ಟು, ಮಕ್ಕಳಿಗೆ ದತ್ತು ನೀಡಿ, ಅವುಗಳನ್ನು ಪೋಷಿಸುವುದರ ಮೂಲಕ ಹಸಿರು ವಾತಾವರಣವನ್ನು ಸೃಷ್ಟಿಸುವುದು.
2. ವಿದ್ಯಾರ್ಥಿಗಳನ್ನು ಪುಸ್ತಕಗಳನ್ನು ಸಂಗ್ರಹಿಸುವಂತೆ ಪ್ರೋತ್ಸಾಹಿಸುವುದು ಹಾಗೂ ಶಾಲೆಗಳಲ್ಲಿ ಪುಸ್ತಕ ಬ್ಯಾಂಕ್‌ಗಳನ್ನು ಸ್ಥಾಪಿಸುವುದು.
3. ಹಳೆಯ ಪುಸ್ತಕಗಳು, ಬಳಸದ ಲೇಖನ ಸಾಮಗ್ರಿಗಳು, ಸಮವಸ್ತ್ರ, ಬ್ಯಾಗ್‌ಗಳು ಇತ್ಯಾದಿಗಳನ್ನು ಮರುಬಳಕೆ ಮಾಡುವುದು.
4. ಪುಸ್ತಕ ಬ್ಯಾಂಕ್‌ಗಳ ಮೂಲಕ ಪ್ರತಿ ಪಂಚಾಯಿತಿಯಲ್ಲಿ ಕನಿಷ್ಠ ಒಂದು ಶಾಲೆಯನ್ನು ಪ್ಲಾಸ್ಟಿಕ್ ಮುಕ್ತ ಶಾಲೆಯನ್ನು ಸ್ಥಾಪಿಸುವುದು.
5. ಪರಿಸರ ದಿನಾಚರಣೆಯಂದು ಪ್ರತಿ ವಿದ್ಯಾರ್ಥಿಯು ಕನಿಷ್ಠ 5 ವ್ಯಕ್ತಿಗಳನ್ನು ಪರಿಸರ ಸಂರಕ್ಷಣೆ ಕುರಿತು ಪ್ರತಿಜ್ಞೆ ತೆಗೆದುಕೊಳ್ಳುವಂತೆ ಪ್ರೇರೇಪಿಸುವುದು.
6. ಎಲ್ಲಾ ಶಾಲೆಗಳ ಕ್ಯಾಂಟೀನ್‌ಗಳಲ್ಲಿ ಆಹಾರ ವ್ಯರ್ಥವಾಗುವುದನ್ನು ಕಡಿಮೆ ಮಾಡಲು ಕ್ರಮಗಳನ್ನು ತೆಗೆದು ಕೊಳ್ಳುವುದು ಹಾಗೂ ಈ ಬಗ್ಗೆ ಶಿಕ್ಷಕರು ವಿದ್ಯಾರ್ಥಿಗಳಿಗೆ ಶಿಕ್ಷಣನೀಡುವುದು

ಎಲ್ಲಾ ಶಾಲೆಗಳು/ಸಂಸ್ಥೆಗಳು ಶೂನ್ಯ ತ್ಯಾಜ್ಯ ಘಟನೆಗಳಿಗೆ ಶ್ರಮಿಸಬೇಕು ಹಾಗೂ ಮಿಶ್ರಗೊಬ್ಬರ ಕ್ರಮಗಳನ್ನು ಅಳವಡಿಸಿಕೊಳ್ಳುವುದು.

7. ಎಲ್ಲಾ ಶಾಲೆಗಳು/ಸಂಸ್ಥೆಗಳು ಸುರಕ್ಷತೆಗಾಗಿ ನಿಗದಿತ ಮಾರ್ಗಸೂಚಿಗಳನ್ನು ಅಳವಡಿಸಿಕೊಂಡು ಕಾರ್ಯಗತಗೊಳಿಸಬೇಕು.
8. ವಿದ್ಯುನ್ಮಾನ ತ್ಯಾಜ್ಯದ ವಿಲೇವಾರಿ ಬಗ್ಗೆ ಜಾಗೃತಿ ಮೂಡಿಸುವುದು.
9. ಪರಿಸರ ಸಂರಕ್ಷಣೆ ಹಾಗೂ ಪರಿಸರಕ್ಕಾಗಿ ಜೀವನ ಶೈಲಿ ಕುರಿತು ಶಾಲಾ ಹಂತದಲ್ಲಿವಿದ್ಯಾರ್ಥಿಗಳಿಗೆ ಚಿತ್ರಕಲೆ/ಪೋಸ್ಟರ್ ರಚನೆ ಸ್ಪರ್ಧೆ, ರಸಪ್ರಶ್ನೆ ಸ್ಪರ್ಧೆ, ಚರ್ಚೆ, ಭಾಷಣ, ಘೋಷವಾಕ್ಯಗಳ ರಚನೆ, ಕವನ, ವ್ಯಂಗ್ಯ ಚಿತ್ರಗಳ ರಚನೆ ಮುಂತಾದ ಸ್ಪರ್ಧೆಗಳನ್ನು ಹಮ್ಮಿಕೊಳ್ಳುವುದು.
10. ಸಾರ್ವಜನಿಕರು, ಪಂಚಾಯತ್ ಇಲಾಖೆ, ಎಸ್.ಡಿ.ಎಂ.ಸಿ. ನೆರವಿನೊಂದಿಗೆ ಪರಿಸರ ಸಂರಕ್ಷಣೆ ಕುರಿತು ಸೈಕಲ್ ಮೂಲಕ ಜಾಥ ಕೈಗೊಂಡು ಘೋಷಣೆಗಳನ್ನು ಕೂಗಿ ಸಮುದಾಯದಲ್ಲಿ ಪರಿಸರ ಸಂರಕ್ಷಣೆ ಬಗ್ಗೆ ಜಾಗೃತಿ ಮೂಡಿಸುವುದು.
11. ಸಮುದಾಯದ ಸ್ವಚ್ಛತಾ ಅಭಿಯಾನಗಳಲ್ಲಿ ಸ್ವಯಂ ಸೇವಕರು ಭಾಗವಹಿಸುವಂತೆ ಪ್ರೇರೇಪಿಸುವುದು.
12. NCC, NSS, Scouts and Guides ಇತ್ಯಾದಿ ತಂಡಗಳ ನೆರವಿನೊಂದಿಗೆ ಶಾಲಾ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಅರಣ್ಯ ಇಲಾಖೆ, ತೋಟಗಾರಿಕೆ ಇಲಾಖೆ ವತಿಯಿಂದ ಮರ ಗಿಡಗಳನ್ನು ನೆಡುವ ಕಾರ್ಯದಲ್ಲಿ ವಿದ್ಯಾರ್ಥಿಗಳ ಸಹಕಾರ ನೀಡುವುದು.
13. ಶಾಲೆಯ ಕಾಂಪೌಂಡ್ ಒಳಗೆ ನೆರಳಿನ ಗಿಡಗಳಾದ ಹೊಂಗೆ, ನೇರಳೆ, ಮಾವು, ಸೀಬೆ, ನೆಲ್ಲಿ, ನಿಂಬೆ, ಹಲಸು, ದಾಳಿಂಬೆ, ಸಪೋಟ ಹಾಗೂ ಇತರೆ ಹಣ್ಣು ಮತ್ತು ಹೂವಿನ ಗಿಡಗಳನ್ನು ಬೆಳೆಸುವುದು.

ಜಿಲ್ಲಾ ಹಂತದಲ್ಲಿ ಉಪನಿರ್ದೇಶಕರು(ಆಡಳಿತ) ರವರು ಶಾಲಾ ಹಂತದಲ್ಲಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಕ್ರಮಕೈಗೊಳ್ಳುವುದು ಹಾಗೂ ಕಾರ್ಯಕ್ರಮ ಅನುಷ್ಠಾನಗೊಳಿಸಿದ ಬಗ್ಗೆ ಪೋಟೋ ಸಹಿತ ಮಾಹಿತಿಯನ್ನು missionlifeins.5@gmail.com ಗೆ ಸಲ್ಲಿಸಲು ಸೂಚಿಸಿದೆ.

೩೦.೨೦.೦೯/೨೦

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ ಕರ್ನಾಟಕ
ಬೆಂಗಳೂರು

ಅಗತ್ಯ ಕ್ರಮಕ್ಕಾಗಿ:

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು(ಆಡಳಿತ) ಮತ್ತು ಜಿಲ್ಲಾ ಉಪಸಮನ್ವಯಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ಇವರ ಮೂಲಕ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಶಾಲಾ ಮುಖ್ಯ ಶಿಕ್ಷಕರಿಗೆ ಕಳುಹಿಸುವುದು.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಅಭಿವೃದ್ಧಿ), ಡಯಟ್ ರವರಿಗೆ.
3. ಕಛೇರಿ ಪ್ರತಿ.